# 2ಎ ಮೀಸಲಿಗೆ ಪ್ರಬಲ ಜಾತಿ ಸೇರ್ಪಡೆಗೊಳಿಸಲು ವಿರೋಧ

## ಹಿಂದುಳಿದ ವರ್ಗಗಳ ವೇದಿಕೆ ಸರ್ಕಾರಕ್ಕೆ ಆಗ್ರಹ

**ಬೆಂಗಳೂರು:** ಪ್ರಬಲ ಜಾತಿಗಳನ್ನು 2(ಎ) ಸಮುದಾಯಕ್ಕೆ ಸೇರ್ಪಡೆಗೊಳಿಸಬಾರದು. ಈ ಬಗೆಗಿನ ಉನ್ನತ ಮಟ್ಟದಸಮಿತಿಯನ್ನುರದ್ದುಗೊಳಿಸಬೇಕು ಹಾಗೂ ಪ್ರಬಲ ಜಾತಿಗಳಿಗೆ ಬಜೆಟ್‌ನಲ್ಲಿ ನೀಡಿರುವಂತೆ ಅತಿ ಹಿಂದುಳಿದ ಸಮುದಾಯಗಳಿಗೂ ಹೆಚ್ಚಿನ ಅನುದಾನ ನೀಡಬೇಕೆಂದು ಅತಿ ಹಿಂದುಳಿದವರ್ಗಗಳ ವೇದಿಕೆ ರಾಜ್ಯ ಸರ್ಕಾರವನ್ನು ಆಗ್ರಹಿಸಿದೆ. ವೇದಿಕೆಯ ಅಧ್ಯಕ್ಷರಾದ ಎಂ.ಸಿ.ವೇಣು ಗೋಪಾಲ್ ಹಾಗೂ ಗೌರವಾಧ್ಯಕ್ಷ ಮುಖ್ಯಮಂತ್ರಿ ಚಂದ್ರು ನೇತೃತ್ವದ ನಿಯೋಗ ಮಂಗಳವಾರ ಮುಖ್ಯಮಂತ್ರಿ ಯಡಿಯೂರಪ್ಪ, ಹಿಂದುಳಿದ ವರ್ಗಗಳ ಶಾಶ್ವತಆಯೋಗದಅಧ್ಯಕ್ಷ ಜಯಪ್ರಕಾಶ್ ಹೆಗ್ಡೆ, ಸಚಿವ ಕೋಟ ಶ್ರೀನಿವಾಸ ಪೂಜಾರಿ ಅವರನ್ನು ಭೇಟಿ ಮಾಡಿ ಈ ಆಗ್ರಹ ಮಾಡಿತು.

ತಮ್ಮನ್ನು ಭೇಟಿಯಾದ ಅತಿ ಹಿಂದುಳಿದ ವರ್ಗಗಳಜಾಗೃತವೇದಿಕೆಯನಿಯೋಗದ ಮನವಿಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸಿದ ಮುಖ್ಯಮಂತ್ರಿ ಬಿ.ಎಸ್ ಯಡಿಯೂರಪ್ಪ, ಬಜೆಟ್‌ನಲ್ಲಿ ಘೋಷಿಸಿರುವ ಜೊತೆಗೆ ಹಿಂದುಳಿದ ವರ್ಗಗಳಿಗೆ ಇನ್ನಷ್ಟು ಹೆಚ್ಚಿನ ಅನುದಾನವನ್ನು ನೀಡಲಾಗುವುದು ಎಂದು ಭರವಸೆ ನೀಡಿದರು.

ನಿಯೋಗವು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿತು: ನಿಯೋಗದಲ್ಲಿ ವೇದಿಕೆಯ ಗೌರವ ಸಲಹೆಗಾರರೂ ಆದ ಮಾಜಿ ಸಭಾಪತಿ ವಿ.ಆರ್.ಸುದರ್ಶನ್, ವಿಧಾನ ಪರಿಷತ್ ಸದಸ್ಯರಾದ ಪಿ.ಆರ್. ರಮೇಶ್, ಕೆ.ಪಿ.ನಂಜುಂಡಿ, ವೇದಿಕೆಯ ಪ್ರೊ.ನರಸಿಂಹಯ್ಯ, ವೇದಿಕೆಯ ಗೌರವ ಸಲಹೆಗಾರ ಡಾ। ಸಿ.ಎಸ್.ದ್ವಾರಕಾನಾಥ್ ಸೇರಿದಂತೆ ಹಲವರು ಇದ್ದರು.